# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 175 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| **ವಿಷಯ** | : | ರಾಜ್ಯದ ಪ್ರವಾಸಿ ತಾಣಗಳ ಮೂಲ ಸೌಕರ್ಯ ಹಾಗೂ ಉತ್ತೇಜನಕ್ಕೆ ಕೈಗೊಂಡ ಕ್ರಮಗಳು. |
| **ಉತ್ತರಿಸುವ ದಿನಾಂಕ** | : | 10.12.2018. |
| **ಉತ್ತರಿಸುವ ಸಚಿವರು** | : | ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗಿರುವಂತೆ ಪ್ರವಾಸೋದ್ಯಮ ಇಲಾಖೆಯು ಗುರುತಿಸಿರುವ ರಾಜ್ಯದಲ್ಲಿನ ಪಾರಂಪರಿಕ ತಾಣಗಳೂ ಸೇರಿದಂತೆ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಇಲಾಖೆಯು ಗುರುತಿಸಿರುವ ಪ್ರವಾಸಿ ತಾಣಗಳ ಸಂಖ್ಯೆ 319 ಆಗಿರುತ್ತದೆ. |
| ಆ) | ಕಳೆದ ಸಾಲಿನಲ್ಲಿ ಈ ಪ್ರವಾಸಿ ತಾಣಗಳಿಗೆ ಭೇಟಿ ನೀಡಿದ ಸ್ವದೇಶಿ ಹಾಗೂ ವಿದೇಶಿ ಪ್ರವಾಸಿಗರ ಸಂಖ್ಯೆ ಎಷ್ಟು; ಈ ಪ್ರಮಾಣ ಪ್ರತಿ ವರ್ಷವೂ ಏರಿಕೆಯಾಗುತ್ತಿದೆಯೇ; | 2017-18ನೇ ಸಾಲಿನಲ್ಲಿ ಏಪ್ರಿಲ್-2017 ರಿಂದ ಮಾರ್ಚ್-2018 ರ ರವರೆಗೆ ರಾಜ್ಯದಲ್ಲಿರುವ ಪ್ರವಾಸಿ ತಾಣಗಳಿಗೆ ಭೇಟಿ ನೀಡಿರುವ ಪ್ರವಾಸಿಗರ ವಿವರ ಕೆಳಗಿನಂತಿದೆ. (ಕೋಷ್ಟಕ ಕೆಳಗೆ) ದೇಶಿಯ ಪ್ರವಾಸಿಗರ ಭೇಟಿ ನೀಡುವ ಸಂಖ್ಯೆಯಲ್ಲಿ ಪ್ರತಿವರ್ಷವು ಏರಿಕೆಯಾಗಿರುತ್ತದೆ. ವಿದೇಶಿ ಪ್ರವಾಸಿಗರ ಬೇಟಿಯಲ್ಲಿ ಏರಿಳಿತವಾಗುತ್ತದೆ. |
| ಇ) | ಪ್ರವಾಸಿ ತಾಣಗಳೆಂದು ಗುರುತಿಸಿರುವ ಸ್ಥಳಗಳಲ್ಲಿ ಪರವಾಸಿಗರಿಂದ ಶುಲ್ಕ ವಸೂಲಾತಿಗೆ ಕ್ರಮ ವಹಿಸಲಾಗಿದೆಯೇ; ಹಾಗಿದ್ದಲ್ಲಿ ಕಳೆದ ಸಾಲಿನಲ್ಲಿ ಪ್ರವಾಸಿಗರಿಂದ ಹರಿದು ಬಂದ ಆದಾಯವೆಷ್ಟು; | ಯಾದಗಿರಿ ನಗರದಲ್ಲಿರುವ ಲುಂಬಿನಿ ವನ ಹೊರತುಪಡಿಸಿ, ಇತರೆ ಯಾವ ಪ್ರವಾಸಿ ತಾಣಗಳಲ್ಲಿಯು ಪ್ರವಾಸೋದ್ಯಮ ಇಲಾಖೆಯು ಪ್ರವಾಸಿಗರಿಂದ ಶುಲ್ಕ ಪಡೆಯುತ್ತಿಲ್ಲ. ಸದರಿ ಉದ್ಯಾನವನಕ್ಕೆ ಸಂಬಂಧಿಸಿದಂತೆ 2017-18 ನೇ ಸಾಲಿನಲ್ಲಿ ರೂ.3,15,035/-ಗಳನ್ನು ಪ್ರವೇಶ ಶುಲ್ಕವಾಗಿ ಪಡೆಯಲಾಗಿದೆ. |

| ವರ್ಷ | ಸ್ವದೇಶಿ ಪ್ರವಾಸಿಗರ ಸಂಖ್ಯೆ | ವಿದೇಶಿ ಪ್ರವಾಸಿಗರ ಸಂಖ್ಯೆ | ಒಟ್ಟು ಪ್ರವಾಸಿಗರ ಪ್ರವಾಸಿಗರ ಸಂಖ್ಯೆ |
|---|---|---|---|
| 2017-18 | 19,53,35,510 | 4,45,555 | 19,57,81,065 |

...2

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಈ) | ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ಹಾಗೂ ಪ್ರವಾಸೋದ್ಯಮದ ಉತ್ತೇಜನಕ್ಕೆ ಸರ್ಕಾರವು ಹೊಸದಾಗಿ ತೆಗೆದುಕೊಂಡಿರುವ ಕ್ರಮಗಳೇನು? | ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಅನುಕೂಲಕ್ಕಾಗಿ ಪ್ರವಾಸಿ ತಾಣಗಳನ್ನು ಸಂಪರ್ಕಿಸುವ ರಸ್ತೆ ಅಭಿವೃದ್ಧಿ, ಪ್ರವಾಸಿ ಮೂಲ ಸೌಲಭ್ಯಗಳನ್ನು ಕಲ್ಪಿಸುವುದು, ಸೈನೇಜುಗಳನ್ನು ಅಳವಡಿಸುವುದು, ಶೌಚಾಲಯ ನಿರ್ಮಾಣ ಮುಂತಾದ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ, ಪ್ರವಾಸೋದ್ಯಮ ಉತ್ತೇಜನಕ್ಕೆ ಸಂಬಂಧಿಸಿದಂತೆ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದ ಪ್ರಮುಖ ದಿನಪತ್ರಿಕೆಗಳು, ಸಂಚಿಕೆಗಳಲ್ಲಿ ಜಾಹಿರಾತು ನೀಡುವುದು, ಪ್ರವಾಸಿ ಮೇಳಗಳಲ್ಲಿ ಭಾಗವಹಿಸುವುದು, ರೋಡ್ ಶೋಗಳನ್ನು ನಡೆಸುವುದು, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಹಾಗೂ ಇತರೆ ಸೋಶಿಯಲ್ ಮೀಡಿಯಾಗಳಲ್ಲಿ ಜಾಹಿರಾತು ನೀಡುವ ಮೂಲಕ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಕ್ರಮ ವಹಿಸಲಾಗುತ್ತಿದೆ. |

ಪ್ರಇ 94 ಪ್ರವಾವಿ 2018

(ಸಾ.ರಾ.ಮಹೇಶ್)
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು